All India Radio: Bangalore
National Bulletin In Kannada
09.10.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1 ಬ್ರಿಟನ್ ಪ್ರಧಾನಿಯೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಮಾತುಕತೆ; ಉಭಯ ದೇಶಗಳ ನಡುವಿನ ಪಾಲುದಾರಿಕೆಯ ಪ್ರಗತಿ ಪರಿಶೀಲನೆ

2 ಡಿಜಿಟಲ್ ಬಂಧನ ಪ್ರಕರಣ: ದೇಶಾದ್ಯಂತ ೪೦ ಸ್ಥಳಗಳಲ್ಲಿ ಸಿಬಿಐ ಶೋಧ

3 ಶಾಂತಿ ಒಪ್ಪಂದದ ಮೊದಲ ಹಂತಕ್ಕೆ ಇಸ್ರೇಲ್-ಹಮಾಸ್ ಒಪ್ಪಿಗೆ: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಣೆ

4 ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್: ಪಾಕಿಸ್ತಾನ ವಿರುದ್ಧ ಆಸ್ಟ್ರೇಲಿಯಾ ತಂಡಕ್ಕೆ ಭರ್ಜರಿ ಗೆಲುವು

<><><><>

ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಇಂದು ಮುಂಬೈನಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಎರಡು ದಿನಗಳ ಭಾರತ ಭೇಟಿಗಾಗಿ ಬ್ರಿಟನ್ ಪ್ರಧಾನಿ ನಿನ್ನೆ ಮುಂಬೈಗೆ ಆಗಮಿಸಿದರು. ಸ್ಟಾರ್ಮರ್ ಅವರೊಂದಿಗೆ ಬ್ರಿಟನ್‌ನ ದೊಡ್ಡ ವ್ಯಾಪಾರ ನಿಯೋಗವಿದೆ. ಮಾತುಕತೆಗಳ ಸಮಯದಲ್ಲಿ, ಉಭಯ ನಾಯಕರು 'ವಿಷನ್ ೨೦೩೫' ಕ್ಕೆ ಅನುಗುಣವಾಗಿ ಭಾರತ-ಬ್ರಿಟನ್ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ವೈವಿಧ್ಯಮಯ ಅಂಶಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ. 'ವಿಷನ್ ೨೦೩೫' ವ್ಯಾಪಾರ ಮತ್ತು ಹೂಡಿಕೆ, ತಂತ್ರಜ್ಞಾನ ಮತ್ತು ನಾವೀನ್ಯತೆ, ರಕ್ಷಣೆ ಮತ್ತು ಭದ್ರತೆ, ಹವಾಮಾನ ಮತ್ತು ಇಂಧನ, ಆರೋಗ್ಯ, ಶಿಕ್ಷಣ ಮತ್ತು ಜನರ ನಡುವಿನ ಸಂಬಂಧಗಳ ಕುರಿತ ಪ್ರಮುಖ ಕಾರ್ಯಕ್ರಮಗಳು ಮತ್ತು ಉಪಕ್ರಮಗಳ ಕೇಂದ್ರೀಕೃತ ಮತ್ತು ಸಮಯಬದ್ಧ ೧೦ ವರ್ಷಗಳ ಮಾರ್ಗಸೂಚಿಯಾಗಿದೆ. ಭವಿಷ್ಯದ ಭಾರತ-ಬ್ರಿಟನ್ ಆರ್ಥಿಕ ಪಾಲುದಾರಿಕೆಯ ಕೇಂದ್ರ ಸ್ತಂಭವಾಗಿ ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ ಕುರಿತು ಉಭಯ ನಾಯಕರು, ಉದ್ಯಮ ನಾಯಕರೊಂದಿಗೆ ಸಭೆ ನಡೆಸಲಿದ್ದಾರೆ. ಇದೇ ವೇಳೆ ಉಭಯ ನಾಯಕರು ಪ್ರಾದೇಶಿಕ ಮತ್ತು

ಜಾಗತಿಕ ಪ್ರಾಮುಖ್ಯತೆಯ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಅಲ್ಲದೇ ಉದ್ಯಮ ತಜ್ಞರು, ನೀತಿ ನಿರೂಪಕರು ಮತ್ತು ನಾವೀನ್ಯಕಾರರೊಂದಿಗೆ ಸಂವಾದ ನಡೆಸಲಿದ್ದಾರೆ. ನಂತರ ಪ್ರಧಾನಿ ಮೋದಿ ಮತ್ತು ಪ್ರಧಾನಿ ಸ್ಟಾರ್ಮರ್ ಇಂದು ಮುಂಬೈನಲ್ಲಿ ನಡೆಯಲಿರುವ ೬ನೇ ಗ್ಲೋಬಲ್ ಫಿನ್‌ಟೆಕ್ ಫೆಸ್ಟ್‌ನಲ್ಲಿ ಭಾಗವಹಿಸಿ, ಪ್ರಮುಖ ಭಾಷಣ ಮಾಡಲಿದ್ದಾರೆ.

<><><><>

೧೯ ಸಾವಿರದ ೬೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ನವಿ ಮುಂಬೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಪ್ರಧಾನಿ ನರೇಂದ್ರ ಮೋದಿ ನಿನ್ನೆ ಉದ್ಘಾಟಿಸಿದರು. ಈ ವಿಮಾನ ನಿಲ್ದಾಣವನ್ನು ವಾರ್ಷಿಕವಾಗಿ ೯೦ ದಶಲಕ್ಷ ಪ್ರಯಾಣಿಕರನ್ನು ಹಾಗೂ ಮೂರು ದಶಲಕ್ಷ ಮೆಟ್ರಿಕ್‌ಟನ್ ಸರಕು ನಿರ್ವಹಿಸುವ ಸಾಮರ್ಥ್ಯದೊಂದಿಗೆ ವಿನ್ಯಾಸಗೊಳಿಸಲಾಗಿದೆ. ಈ ವೇಳೆ ಮಾತನಾಡಿದ ಪ್ರಧಾನಿ ಮೋದಿ, ಹೊಸ ವಿಮಾನ ನಿಲ್ದಾಣವು ವಿಕಸಿತ ಭಾರತದ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತದೆ ಮತ್ತು ದೇಶದ ಪ್ರಗತಿ, ಸಂಸ್ಕೃತಿ ಮತ್ತು ತಾಂತ್ರಿಕ ಸಾಮರ್ಥ್ಯವನ್ನು ಸಂಕೇತಿಸುತ್ತದೆ ಎಂದು ಹೇಳಿದರು. ವಿಮಾನ ನಿಲ್ದಾಣದ ಕಮಲದ ಆಕಾರದ ವಿನ್ಯಾಸವು ಪ್ರಪಂಚದೊಂದಿಗೆ ವ್ಯಾಪಾರ ಮತ್ತು ಪ್ರವಾಸೋದ್ಯಮ ಸಂಪರ್ಕವನ್ನು ಬಲಪಡಿಸುವುದರ ಜೊತೆಗೆ ಭಾರತದ ಪರಂಪರೆಯನ್ನು ಪ್ರದರ್ಶಿಸುತ್ತದೆ ಎಂದರು. ಇದು ರೈತರು ಮತ್ತು ಮೀನುಗಾರರಿಗೆ ತಮ್ಮ ಉತ್ಪನ್ನಗಳನ್ನು ಜಾಗತಿಕ ಮಾರುಕಟ್ಟೆಗಳಿಗೆ ವೇಗವಾಗಿ ರಫ್ತು ಮಾಡಲು ಸಹಾಯ ಮಾಡುವ ಮೂಲಕ, ಹೂಡಿಕೆಯನ್ನು ಆಕರ್ಷಿಸುವ ಮತ್ತು ಉದ್ಯೋಗವನ್ನು ಸೃಷ್ಟಿಸುವ ಮೂಲಕ ಪ್ರಯೋಜನವನ್ನು ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಧ್ವನಿ : ನರೇಂದ್ರ ಮೋದಿ (೩೨ ಸೆಕೆಂಡ್‌ಗಳು)

ಇದೇ ಸಂದರ್ಭದಲ್ಲಿ ಪ್ರಧಾನಿ, ಮುಂಬೈ ಮೆಟ್ರೋ ೩ನೇ ಮಾರ್ಗದ ೨ಬಿ ಹಂತವನ್ನು ಉದ್ಘಾಟಿಸಿದರು. ೩೭ ಸಾವಿರದ ೨೭೦ ಕೋಟಿ ರೂಪಾಯಿ ಒಟ್ಟು ವೆಚ್ಚದಲ್ಲಿ ನಿರ್ಮಿಸಲಾಗಿರುವ ಒಟ್ಟಾರೆ ಮುಂಬೈ ಮೆಟ್ರೋ ೩ನೇ ಮಾರ್ಗವನ್ನು ರಾಷ್ಟ್ರಕ್ಕೆ ಸಮರ್ಪಿಸಿದರು.

<><><><>

ಕೆನಡಾ ವಿದೇಶಾಂಗ ಸಚಿವೆ ಅನಿತಾ ಆನಂದ್ ಮುಂದಿನ ವಾರ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಇದು ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಿದೆ. ಭಾರತ ಮತ್ತು ಕೆನಡಾ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಪುನಃ ಸ್ಥಾಪಿಸಲು ನಡೆಯುತ್ತಿರುವ ಪ್ರಯತ್ನಗಳ ನಡುವೆ ಅನಿತಾ ಆನಂದ್ ಭಾರತಕ್ಕೆ ಭೇಟಿ ನೀಡಿದ್ದಾರೆ. ಕಳೆದ ತಿಂಗಳು ನ್ಯೂಯಾರ್ಕ್‌ನಲ್ಲಿ ನಡೆದ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಸಂದರ್ಭದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು, ಕೆನಡಾ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರನ್ನು ಭೇಟಿಯಾಗಿದ್ದರು. ಉಭಯ ದೇಶಗಳ ನಡುವಿನ ಸಂಬಂಧಗಳನ್ನು ಪುನರ್ ನಿರ್ಮಿಸುವಲ್ಲಿ ಸಕಾರಾತ್ಮಕ ಹೆಜ್ಜೆಯಾಗಿ ಹೈಕಮಿಷನರ್‌ಗಳ ನೇಮಕವನ್ನು ಡಾ. ಎಸ್. ಜೈಶಂಕರ್ ಸ್ವಾಗತಿಸಿದ್ದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಮೂರು ದಿನಗಳ ಕಾಲ ಗುಜರಾತ್‌ಗೆ ಭೇಟಿ ನೀಡಲಿದ್ದಾರೆ. ನಾಳೆ ಅವರು ಸೋಮನಾಥ ದೇವಾಲಯದಲ್ಲಿ ದೇವರ ದರ್ಶನ ಮಾಡಲಿದ್ದಾರೆ. ನಂತರ ಅವರು, ಗಿರ್ ರಾಷ್ಟ್ರೀಯ ಉದ್ಯಾನವನಕ್ಕೆ ಭೇಟಿ ನೀಡಲಿದ್ದಾರೆ. ಇದೇ ವೇಳೆ ಅವರು, ಸಸಂಗೀರ್‌ನಲ್ಲಿ ಸ್ಥಳೀಯ ಬುಡಕಟ್ಟು ಸಮುದಾಯ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ. ಇದೇ ೧೧ ರಂದು ರಾಷ್ಟ್ರಪತಿಯವರು ದ್ವಾರಕಾದ ದ್ವಾರಕಾಧೀಶ ದೇವಾಲಯದಲ್ಲಿ ದೇವರ ದರ್ಶನ ಪಡೆಯಲಿದ್ದಾರೆ. ನಂತರ ಅವರು, ಅಹಮದಾಬಾದ್‌ನ ಗುಜರಾಥ್ ವಿದ್ಯಾಪೀಠದ ೭೧ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><><><>

ಉತ್ತರ ಪ್ರದೇಶದ ಕಾನ್ಪುರ ನಗರದ ಅಂಗಡಿಯೊಂದರ ಬಳಿ ನಿನ್ನೆ ಸಂಜೆ ಎರಡು ಸ್ಕೂಟಿಗಳು ಸ್ಫೋಟಗೊಂಡ ಪರಿಣಾಮ ಆರು ಜನರು ಗಾಯಗೊಂಡಿದ್ದಾರೆ. ಮೂಲ್ ಗಂಜ್ ಕೊತ್ವಾಲಿಯ ಮಿಶ್ರಿ ಬಜಾರ್ ಪ್ರದೇಶದ ಅಂಗಡಿಯೊಂದರ ಮುಂದೆ ನಿಲ್ಲಿಸಿದ್ದ ಎರಡು ಸ್ಕೂಟಿಗಳು ಸ್ಫೋಟಗೊಂಡಿವೆ. ಆರು ಮಂದಿ ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಾಗಿದ್ದು, ಈ ಪೈಕಿ ಇಬ್ಬರ ಸ್ಥಿತಿ ಗಂಭೀರವಾಗಿದೆ. ವಿಧಿವಿಜ್ಞಾನ ತಂಡ ಮತ್ತು ಬಾಂಬ್ ನಿಷ್ಕ್ರಿಯ ದಳ ಸ್ಥಳಕ್ಕೆ ತಲುಪಿದ್ದು, ತನಿಖೆ ನಡೆಯುತ್ತಿದೆ ಎಂದು ಕಾನ್ಪುರ ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

<><><><>

ಅಮೆರಿಕ ಮಧ್ಯಸ್ಥಿಕೆಯ ಶಾಂತಿ ಒಪ್ಪಂದದ ಮೊದಲ ಹಂತಕ್ಕೆ ಇಸ್ರೇಲ್ ಮತ್ತು ಹಮಾಸ್ ಒಪ್ಪಿಕೊಂಡಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಎರಡು ವರ್ಷಗಳ ಯುದ್ಧವನ್ನು ಕೊನೆಗೊಳಿಸಲು, ಗಾಜಾದಲ್ಲಿ ಹೋರಾಟವನ್ನು ನಿಲ್ಲಿಸಲು ಮತ್ತು ಒತ್ತೆಯಾಳುಗಳನ್ನು ಬಿಡುಗಡೆ ಮಾಡಲು, ಈಜಿಪ್ಟ್‌ನ ಶರ್ಮ್ ಎಲ್-ಶೇಖ್‌ನಲ್ಲಿ ನಡೆದ ಮಾತುಕತೆಗಳ ನಂತರ ಟ್ರಂಪ್ ಅವರ ಘೋಷಣೆ ಹೊರಬಿದ್ದಿದೆ. ವರದಿಗಳ ಪ್ರಕಾರ, ಒಪ್ಪಂದದ ಮೊದಲ ಹಂತದಲ್ಲಿ ಹಲವಾರು ಪ್ಯಾಲೆಸ್ತೀನಿಯನ್ ಕೈದಿಗಳಿಗೆ ಬದಲಾಗಿ ಹಮಾಸ್ ಸೆರೆಯಲ್ಲಿರುವ ಎಲ್ಲಾ ಉಳಿದ ಒತ್ತೆಯಾಳುಗಳ ಬಿಡುಗಡೆ ಮತ್ತು ಗಾಜಾದಿಂದ ಇಸ್ರೇಲ್ ಹಂತ-ಹಂತವಾಗಿ ತನ್ನ ಹಿಡಿತ ಸಡಲಿಸುವ ಕ್ರಮಗಳು ಸೇರಿವೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಈ ಕ್ರಮವನ್ನು ಸ್ವಾಗತಿಸಿದ್ದಾರೆ.

<><><>

ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಹಿರಿಯ ನಾಗರಿಕರು, ದಿವ್ಯಾಂಗರು ಮತ್ತು ಸೇವಾ ಮತದಾರರು ಅಂಚೆ ಮತಪತ್ರವನ್ನು ಬಳಸಿಕೊಂಡು ಮತ ಚಲಾಯಿಸಲು ಚುನಾವಣಾ ಆಯೋಗ ಅನುಕೂಲ ಕಲ್ಪಿಸಲಿದೆ. ೮೫ ವರ್ಷಕ್ಕಿಂತ ಮೇಲ್ಪಟ್ಟ ಮತದಾರರು ಮತ್ತು ದಿವ್ಯಾಂಗ ಮತದಾರರು ಅಂಚೆ ಮತಪತ್ರದ ಮೂಲಕ ಮತ ಚಲಾಯಿಸಬಹುದು. ಅಂತಹ ಮತದಾರರು ಫಾರ್ಮ್ ೧೨ ಡಿ ಬಳಸಿ ಈ ಸೌಲಭ್ಯವನ್ನು ಪಡೆಯಬಹುದು ಮತ್ತು ಚುನಾವಣೆಯ ಅಧಿಸೂಚನೆ ಹೊರಡಿಸಿದ ಐದು ದಿನಗಳಲ್ಲಿ ತಮ್ಮ ಬೂತ್ ಮಟ್ಟದ ಅಧಿಕಾರಿ ಮೂಲಕ ಚುನಾವಣಾ ಅಧಿಕಾರಿಗೆ ಸಲ್ಲಿಸಬಹುದು ಎಂದು ಆಯೋಗ ತಿಳಿಸಿದೆ. ಮತದಾನದ ದಿನಾಂಕದಂದು ಅಗತ್ಯ ಸೇವೆಗಳಲ್ಲಿರುವ ಮತದಾರರು ತಮ್ಮ ಸಂಬಂಧಪಟ್ಟ ಇಲಾಖೆಯ ಗೊತ್ತುಪಡಿಸಿದ ನೋಡಲ್ ಅಧಿಕಾರಿ ಮೂಲಕ ಅಂಚೆ ಮತಪತ್ರ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದು ಎಂದು ಚುನಾವಣಾ ಆಯೋಗ ಹೇಳಿದೆ.

<><><>

ತಮಿಳುನಾಡಿನ ರಾಮೇಶ್ವರಂನಲ್ಲಿ ಮೂವತ್ತು ಮೀನುಗಾರರನ್ನು ಶ್ರೀಲಂಕಾ ನೌಕಾಪಡೆ ಬಂಧಿಸಿದೆ. ಅಂತಾರಾಷ್ಟ್ರೀಯ ಜಲಪ್ರದೇಶವನ್ನು ಅತಿಕ್ರಮಣ ಮಾಡಿದ ಆರೋಪದ ಮೇಲೆ ಅವರನ್ನು ಬಂಧಿಸಿದೆ. ಈ ಮೀನುಗಾರರು ಸಮುದ್ರದ ಮಧ್ಯದಲ್ಲಿ ಮೀನುಗಾರಿಕೆ ನಡೆಸುತ್ತಿದ್ದಾಗ ಶ್ರೀಲಂಕಾ ನೌಕಾಪಡೆ ಅವರನ್ನು ಸೆರೆಹಿಡಿದಿದೆ.

<><><>

ಕೆನಡಾ ವಿದೇಶಾಂಗ ಸಚಿವೆ ಅನಿತಾ ಆನಂದ್ ಮುಂದಿನ ವಾರ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಇದು ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಿದೆ. ಭಾರತ ಮತ್ತು ಕೆನಡಾ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಪುನಃ ಸ್ಥಾಪಿಸಲು ನಡೆಯುತ್ತಿರುವ ಪ್ರಯತ್ನಗಳ ನಡುವೆ ಅನಿತಾ ಆನಂದ್ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಕಳೆದ ತಿಂಗಳು ನ್ಯೂಯಾರ್ಕ್‌ನಲ್ಲಿ ನಡೆದ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಸಂದರ್ಭದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು, ಕೆನಡಾ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರನ್ನು ಭೇಟಿಯಾಗಿದ್ದರು. ಉಭಯ ದೇಶಗಳ ನಡುವಿನ ಸಂಬಂಧಗಳನ್ನು ಪುನರ್ ನಿರ್ಮಿಸುವಲ್ಲಿ ಸಕಾರಾತ್ಮಕ ಹೆಜ್ಜೆಯಾಗಿ ಹೈಕಮಿಷನರ್‌ಗಳ ನೇಮಕವನ್ನು ಡಾ. ಎಸ್. ಜೈಶಂಕರ್ ಸ್ವಾಗತಿಸಿದ್ದರು.

<><><>

ಕೊಲೊಂಬೋದ ಆರ್. ಪ್ರೇಮದಾಸ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳೆಯರ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಪಾಕಿಸ್ತಾನ ವಿರುದ್ಧ ಆಸ್ಟ್ರೇಲಿಯಾ ವನಿತಾ ತಂಡ ೧೦೭ ರನ್‌ಗಳಿಂದ ಭರ್ಜರಿ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ, ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್‌ಗಳಿಗೆ ೨೨೧ ರನ್ ಗಳಿಸಿತು. ಈ ಗುರಿಯನ್ನು ಬೆನ್ನತ್ತಿದ ಪಾಕಿಸ್ತಾನ ೩೬.೩ ಓವರ್‌ಗಳಲ್ಲಿ ಕೇವಲ ೧೧೪ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ವಿಶಾಖಪಟ್ಟಣದಲ್ಲಿ ಇಂದು ನಡೆಯುವ ಪಂದ್ಯದಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

<><><>

ಮುಂದಿನ ೨ ರಿಂದ ೩ ದಿನಗಳಲ್ಲಿ ಕರ್ನಾಟಕ, ತಮಿಳುನಾಡು, ಕೇರಳ, ಮಾಹೆ, ದಕ್ಷಿಣ ಒಳನಾಡು, ಆಂಧ್ರಪ್ರದೇಶದ ಕರಾವಳಿ, ಯಾಣಂ ಮತ್ತು ರಾಯಲಸೀಮಾದ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆಯಾಗಲಿದೆ. ಇದೇ ವೇಳೆ  ಇಂದು ಮತ್ತು ನಾಳೆ ಲಕ್ಷದ್ವೀಪ ಮತ್ತು ಕರಾವಳಿ ಕರ್ನಾಟಕದಾದ್ಯಂತ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>